# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ.

ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451, ಶಿವಮೊಗ್ಗ, ಕರ್ನಾಟಕ.

Phone No: 08282–256166, mob: 7022254993 ಇ–ಮೇಲ್: regexamku@gmail.com, ವೆಬ್‌ಸೈಟ್: www.kuvempu.ac.in


**Re-Accredited by NAAC with 'A' Grade, Ranked 73rd Place in NIRF– 2019 and Secured 45th Place in SCIMAGO Institutional Rankings**

ಸಂಖ್ಯೆ: ಕುವಿ/ಪವಿ/D1934/2021–22 ದಿನಾಂಕ: 17–01–2022.

ಗೆ,

ಆತ್ಮೀಯ ವಿದ್ಯಾರ್ಥಿ ಮಿತ್ರರೆ,

ದಿನಾಂಕ: 27–01–2022ರಿಂದ ಪ್ರಾರಂಭವಾಗಬೇಕಾಗಿದ್ದ ದೂರಶಿಕ್ಷಣ ನಿರ್ದೇಶನಾಲಯದ ಎಲ್ಲಾ ಪರೀಕ್ಷೆಗಳನ್ನು ಮಾನ್ಯ ಕುಲಪತಿಗಳ ಆದೇಶದಂತೆ ಸಾಂಕ್ರಾಮಿಕ ರೋಗ ಕೋವಿಡ್–19 ಮತ್ತು ಅದರ ರೂಪಾಂತರಿ ಒಮ್ರಿಕಾನ್ ವ್ಯಾಪಕವಾಗಿ ಹರಡುತ್ತಿರುವ ಕಾರಣಗಳಿಂದಾಗಿ ಮುಂದೂಡಲಾಗಿದೆ.

2019ರ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿ ಪಡೆದು ನೋಂದಣಿಗೊಂಡ ವಿದ್ಯಾರ್ಥಿಗಳಿಗೆ ಸಮಯಕ್ಕೆ ಸರಿಯಾಗಿ ಪರೀಕ್ಷೆಗಳನ್ನು ನಡೆಸದಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಎಲ್ಲಾ ವಿದ್ಯಾರ್ಥಿ ಮಿತ್ರರುಗಳ ದೂರವಾಣಿ ಕರೆಗಳು, ನೋವುಗಳು, ಕೋರಿಕೆಗಳು ಹಾಗೂ ಪ್ರಾರ್ಥನೆಗಳು ವಿಶ್ವವಿದ್ಯಾಲಯದ ಗಮನದಲ್ಲಿವೆ. ಮಾನ್ಯ ಕುಲಪತಿಗಳು, ಕುಲಸಚಿವರು ಹಾಗೂ ವಿಶ್ವವಿದ್ಯಾಲಯದ ಎಲ್ಲಾ ಸಿಂಡಿಕೇಟ್ ಹಾಗೂ ಶಿಕ್ಷಣ ಮಂಡಳಿ ಸದಸ್ಯರುಗಳು ವಿದ್ಯಾರ್ಥಿಗಳ ಹಿತ ಚಿಂತಕರಾಗಿದ್ದು ಎಲ್ಲಾ ಪರೀಕ್ಷೆಗಳನ್ನು 2022ರಲ್ಲಿ ಸಂಪೂರ್ಣಗೊಳಿಸುವ ಕ್ರಮಗಳನ್ನು ಕೈಗೊಂಡಿದ್ದಾರೆ. ಕರೋನ ಮತ್ತು ಒಮ್ರಿಕಾನ್ ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಮತ್ತು ಫೆಬ್ರವರಿ ತಿಂಗಳಿನಲ್ಲಿ ಗರಿಷ್ಠ ಪ್ರಮಾಣದಲ್ಲಿ ಜನತೆಯ ಆರೋಗ್ಯದ ಮೇಲೆ ಹಾನಿ ಉಂಟಾಗುವ ಸಾಧ್ಯತೆ ಇರುವುದರಿಂದ ಪರೀಕ್ಷೆಗಳನ್ನು ಮುಂದೂಡಲಾಗುತ್ತಿದ್ದು, ವಿದ್ಯಾರ್ಥಿ ಮಿತ್ರರು ಯಾವುದೇ ಗೊಂದಲ, ಅನುಮಾನ, ಹತಾಶೆ, ದುಃಖ ಇತ್ಯಾದಿಗಳನ್ನು ಮನಸ್ಸಿಗೆ ತೆಗೆದುಕೊಳ್ಳದೆ ಪರೀಕ್ಷೆಗೆ ಸಿದ್ಧರಾಗಬೇಕಾದ ಸಮಯವಾಗಿರಬೇಕಾಗಿದೆ.

ಆರೋಗ್ಯವೇ ಮಹಾ ಭಾಗ್ಯವಾಗಿದ್ದು, ಎಲ್ಲಾ ವಿದ್ಯಾರ್ಥಿಗಳು ಆರೋಗ್ಯದ ಬಗ್ಗೆ ಹೆಚ್ಚಿನ ಗಮನವನ್ನು ಹರಿಸಿ ಅದೇ ಸಮಯದಲ್ಲಿ ಪರೀಕ್ಷಾ ತಯಾರಿ ಹಾಗೂ ಬರಲಿರುವ ವರ್ಷದ ಶೈಕ್ಷಣಿಕ ಅಧ್ಯಯನಕ್ಕೆ ಆದ್ಯ ಗಮನವನ್ನು ನೀಡಬೇಕೆಂದು ಈ ಮೂಲಕ ಕೋರುತ್ತೇನೆ.

"ಕರಡು ಕುಲಸಚಿವ(ಪರೀಕ್ಷಾಂಗ) ರವರಿಂದ
ಅನುಮೋದಿಸಲ್ಪಟ್ಟಿದೆ"

ತಮ್ಮ ವಿಶ್ವಾಸಿ,

Kaiyalna N.
17.01.22

ಉಪಕುಲಸಚಿವರು (ಪರೀಕ್ಷಾಂಗ)
ದೂರಶಿಕ್ಷಣ
ಕುವೆಂಪು ವಿಶ್ವವಿದ್ಯಾಲಯ
ಶಂಕರಘಟ್ಟ-577 451